## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಸಾಮಾಜಿಕ ಭದ್ರತೆ ಯೋಜನೆಯಡಿ ಸಂಧ್ಯಾ ಸುರಕ್ಷಾ ಯೋಜನೆಯಂತೆ 65 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ವೃದ್ಧಾಪ್ಯ ಪಿಂಚಣಿ ಮೊತ್ತವನ್ನು ರೂ.1000/- ರಿಂದ ರೂ.1200/-ಕ್ಕೆ ಹೆಚ್ಚಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ : ಆರ್‌ಡಿ 39 ಎಮ್.ಎಸ್.ಟಿ 2021, ದಿನಾಂಕ : 31.07.2021.

~~ ** ~~

ಪ್ರಸ್ತಾವನೆ:

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯದಿಂದ ಬಡತನರೇಖೆಯ ಅಂಚಿನಲ್ಲಿರುವ ಹಿರಿಯ ನಾಗರೀಕರನ್ನು ಆರ್ಥಿಕ ಸಂಕಷ್ಟದಿಂದ ಪಾರು ಪಾಡುವ ಹಾಗೂ ಅವರನ್ನು ಸಮಾಜ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ 65 ವರ್ಷ ಹಾಗೂ ಮೇಲ್ಪಟ್ಟ ಹಿರಿಯನಾಗರೀಕರಿಗೆ ಸಂಧ್ಯಾ ಸುರಕ್ಷಾ ಯೋಜನೆಯನ್ನು ರಾಜ್ಯ ಸರ್ಕಾರದಿಂದ ದಿನಾಂಕ: 29/07/2007 ರಿಂದ ಜಾರಿಗೆ ತರಲಾಗಿದ್ದು, ಈ ಯೋಜನೆಯಡಿ 31/08/2021ರ ಅಂತ್ಯಕ್ಕೆ 27.92 ಲಕ್ಷ ಫಲಾನುಭವಿಗಳು ಸೌಲಭ್ಯ ಪಡೆಯುತ್ತಿದ್ದು, ಮೇಲೆ ಓದಲಾದ ಆದೇಶದಲ್ಲಿ ಮಾಸಿಕ ರೂ. 1000/- ರಿಂದ ರೂ.1200/-ಗಳಂತೆ ಹೆಚ್ಚಿಸಿ ಪಿಂಚಣಿ ಪಾವತಿಸಲಾಗುತ್ತಿದೆ.

ಅದೇ ರೀತಿ ಬಡತನ ರೇಖೆಗಿಂತ ಕೆಳಗಿರುವ 60 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ಆರ್ಥಿಕವಾಗಿ ಸಹಾಯ ಮಾಡುವ ದೃಷ್ಟಿಯಿಂದ ವೃದ್ಧಾಪ್ಯ ವೇತನ ಯೋಜನೆಯನ್ನು 19/11/2007 ರಿಂದ ಜಾರಿಗೆ ತರಲಾಗಿದೆ. ಈ ಯೋಜನೆಯಡಿ 31/08/2021ರ ಅಂತ್ಯಕ್ಕೆ 13.76 ಲಕ್ಷ ಫಲಾನುಭವಿಗಳು ಸೌಲಭ್ಯ ಪಡೆಯುತ್ತಿರುತ್ತಾರೆ.

ಮೇಲೆ ಓದಲಾದ ಆದೇಶದಲ್ಲಿ ಸಾಮಾಜಿಕ ಭದ್ರತಾ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಸಂಧ್ಯಾ ಸುರಕ್ಷಾ ಯೋಜನೆಯಡಿ ಮಾಸಿಕ ಪಿಂಚಣಿ ಮೊತ್ತವನ್ನು ರೂ.1000/-ರಿಂದ ರೂ.1200/-ಗಳಿಗೆ ಹೆಚ್ಚಿಸಲಾಗಿದೆ. ಸದರಿ ಆದೇಶದಲ್ಲಿನ ಹೆಚ್ಚಳವನ್ನು ಇಂದಿರಾಗಾಂಧಿ ವೃದ್ಧಾಪ್ಯ ವೇತನ ಯೋಜನೆಯಡಿಲ್ಲಿನ 65 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೂ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಡಿಎಸ್‌ಎಸ್‌ಪಿ-ಎಂಐಎಸ್‌ಸಿ- 2021,**
**ಬೆಂಗಳೂರು, ದಿನಾಂಕ : 18-09-2021.**

ಸಾಮಾಜಿಕ ಭದ್ರತಾ ಯೋಜನೆಯಡಿ ಸಂಧ್ಯಾ ಸುರಕ್ಷಾ ಯೋಜನೆಯಂತೆ, ಇಂದಿರಾಗಾಂಧಿ ವೃದ್ಧಾಪ್ಯ ವೇತನ ಯೋಜನೆಯಡಿಯಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ನೀಡುತ್ತಿರುವ ಮಾಸಿಕ ಪಿಂಚಣಿ ಮೊತ್ತವನ್ನು ರೂ.1000/- ರಿಂದ ರೂ.1200/- ಗಳಿಗೆ ದಿನಾಂಕ: 01.08.2021 ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಆದೇಶಿಸಿದೆ.

ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಈಗಾಗಲೇ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಈ ಆದೇಶದಲ್ಲಿ ಹೆಚ್ಚಿಸಿರುವ ಮಾಸಾಶನ ಮೊತ್ತವನ್ನು ವಿತರಿಸಲು ನಿರ್ದೇಶಕರು,

.......2

ಖಜಾನೆ ನಿರ್ದೇಶನಾಲಯ ಹಾಗೂ ಜಿಲ್ಲಾ ಖಜಾನಾಧಿಕಾರಿಗಳು / ಉಪ ಖಜಾನಾಧಿಕಾರಿಗಳು ಇವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ542 ವೆಚ್ಚ-7/2021,ದಿ:02.09.2021ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ
ಆಜ್ಞಾನುಸಾರ & ಅವರ ಹೆಸರಿನಲ್ಲಿ,

18/09/2021
[ಜಯಲಕ್ಷ್ಮಿ]
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,
[ಸೇವೆಗಳು-3, ಕೆ.ಎ.ಟಿ.& ಬಾನಿ,
ಭೂ.ಸು.ಕೋ. & ಸಾಮಾಜಿಕ ಭದ್ರತೆ
ಮತ್ತು ಪಿಂಚಣಿಗಳು],

ಇವರಿಗೆ : ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸಸೌಧ, ಬೆಂಗಳೂರು ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 100 ಪ್ರತಿಗಳನ್ನು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಭವನ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋರಿದೆ.

**ಪ್ರತಿಯನ್ನು :**

1. ಮಹಾಲೇಖಪಾಲರು [ಲೆಕ್ಕಪತ್ರ & ಲೆಕ್ಕ ತಪಾಸಣೆ], [ಎ & ಇ] ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು [ಆಯವ್ಯಯ & ಸಂಪನ್ಮೂಲ] ವಿಧಾನಸೌಧ, ಬೆಂಗಳೂರು.
7. ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು / ಬೆಳಗಾವಿ / ಕಲಬುರಗಿ ವಿಭಾಗ.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಮಾನ್ಯ ಕಂದಾಯ ಸಚಿವರ ವಿಶೇಷ ಕರ್ತವ್ಯಾಧಿಕಾರಿ, ವಿಧಾನಸೌಧ, ಬೆಂಗಳೂರು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಯೋಜನೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ [ವೆಚ್ಚ-7], ವಿಧಾನಸೌಧ, ಬೆಂಗಳೂರು.
13. ಎಲ್ಲಾ ಉಪವಿಭಾಗಾಧಿಕಾರಿಗಳು / ತಹಸೀಲ್ದಾರ್‌ರು.
14. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
15. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ